ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಇಲಾಖೆಯಡಿ ಕೈಗೊಳ್ಳಲಾದ ಕ್ರಮಗಳ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):-

189 (209) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಆಹಾರ ಕಲಬೆರಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದಿಂದ ನಿಷೇಧಿಸಲ್ಪಟ್ಟ ರಾಸಾಯನಿಕ ಪದಾರ್ಥಗಳು ಯಾವುವು ; ಅವುಗಳನ್ನು ಯಾವ ಯಾವ ಆಹಾರ ಪದಾರ್ಥಗಳಲ್ಲಿ ಬಳಸಲಾಗುತ್ತಿದೆ ; ಸರ್ಕಾರದ ನಿಷೇಧದ ಹೊರತಾಗಿಯೂ ಆಹಾರ ತಯಾರಿಕೆಯಲ್ಲಿ ನಿಷೇಧಿಸಲ್ಪಟ್ಟ ರಾಸಾಯನಿಕಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ;

(ಆ) ಆಹಾರ ಕಲಬೆರಕೆಯನ್ನು ಪತ್ತೆ ಹಚ್ಚಲು ಯಾವ ಯಾವ ಜಿಲ್ಲೆಗಳಲ್ಲಿ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ ; ಕಳೆದ 3 ವರ್ಷಗಳಲಿ ಈ ಪ್ರಯೋಗಾಲಯದಲ್ಲಿ ಪರೀಕ್ಷಿಸಲಾದ ಮತ್ತು ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಯೋಗಾಲಯವಾರು, ತಿಂಗಳವಾರು ಮಾಹಿತಿ ನೀಡುವುದು)

(ಇ) ಹೋಟಲ್‌ಗಳಲ್ಲಿ ಮತ್ತು ಫಾಸ್ಟ್ ಫುಡ್ ತಯಾರಿಕಾ ಅಂಗಡಿಗಳಲ್ಲಿ ಅಜಿನೋಮೋಟೊ ಮತ್ತು ಬಣ್ಣ ತಯಾರಿಸುವ ರಾಸಾಯನಿಕಗಳ ಬಳಕೆಯಿಂದ ಜನ ಸಾಮಾನ್ಯರ ಆರೋಗ್ಯದ ಮೇಲೆ ಮಾದಕ ವಸ್ತುಗಳ ಸೇವನೆಯ ಪರಿಣಾಮಕ್ಕಿಂತಲೂ ಹೆಚ್ಚು ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಹಾರ ಕಲಬೆರಕೆಯನ್ನು ತಡೆಗಟ್ಟಲು ಜಿಲ್ಲೆಗೊಂದರಂತೆ ಪ್ರಯೋಗಾಲಯ ಸ್ಥಾಪಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ ? (ಮಾಹಿತಿಯನ್ನು ಒದಗಿಸುವುದು)